## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2020-21ನೇ ಸಾಲಿನ 15ನೇ ಹಣಕಾಸು ಆಯೋಗದ ಮೊದಲನೇ ಕಂತಿನ ಮೂಲ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:

1. ಸರ್ಕಾರದ ಮಾರ್ಗಸೂಚಿ ಸಂಖ್ಯೆ:ಗ್ರಾಅಪಂರಾ 191 ಜಿಪಸ 2020, ದಿನಾಂಕ:13-05-2020.
2. ಸರ್ಕಾರದ ಸೇರ್ಪಡೆ ಮಾರ್ಗಸೂಚಿ ಸಂಖ್ಯೆ:ಗ್ರಾಅಪಂರಾ 191 ಜಿಪಸ 2020, ದಿನಾಂಕ: 30-05-2020.
3. ಭಾರತ ಸರ್ಕಾರದ ವಿತ್ತ ಮಂತ್ರಾಲಯ, ವೆಚ್ಚ ಇಲಾಖೆ, ಆರ್ಥಿಕ ಆಯೋಗ ವಿಭಾಗದ ಪತ್ರ ಸಂ.ಎಫ್.15(4)ಎಫ್‌ಸಿ-XV/ಎಫ್‌ಸಿಡಿ/2020-25, ದಿನಾಂಕ:17-06-2020.
4. ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ:ಎಫ್‌ಡಿ 27 ಬಿಜಿಎಲ್ 2020, ದಿನಾಂಕ: 18-06-2020.

ಪ್ರಸ್ತಾವನೆ:

15ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ 2020-21ನೇ ಸಾಲಿಗೆ ಮೂಲ ಅನುದಾನ ರೂ.321700.00ಲಕ್ಷಗಳನ್ನು ಭಾರತ ಸರ್ಕಾರವು ನಿಗಧಿಪಡಿಸಿರುತ್ತದೆ. 15ನೇ ಹಣಕಾಸು ಆಯೋಗದ 2020-21ನೇ ಸಾಲಿನ ಮೂಲ ಅನುದಾನದ (Basic Grants) ಮೊದಲನೇ ಕಂತು ರೂ.804,25,00,000/-(ಎಂಟು ನೂರ ನಾಲ್ಕು ಕೋಟಿ ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಭಾರತ ಸರ್ಕಾರವು ಮೇಲೆ ಓದಲಾದ(3)ರ ಪತ್ರದನ್ವಯ ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಬಿಡುಗಡೆ ಮಾಡಿರುತ್ತದೆ.

ಮೇಲೆ ಓದಲಾದ (4)ರ ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರದಲ್ಲಿ 2020-21ನೇ ಸಾಲಿನ ಮೂಲ ಅನುದಾನದ ಮೊದಲನೇ ಕಂತು ರೂ.804,25,00,000/-(ಎಂಟು ನೂರ ನಾಲ್ಕು ಕೋಟಿ ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ರಾಜ್ಯದ ಬೊಕ್ಕಸಕ್ಕೆ ಜಮೆಯಾಗಿರುವ ಕುರಿತು ದೃಢೀಕರಣವನ್ನು ನೀಡಿರುತ್ತದೆ.

15ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ 2020-21ನೇ ಸಾಲಿನ ಮೂಲ ಅನುದಾನದ (Basic Grant) ಒಂದನೇ ಕಂತು ರೂ.804,25,00,000/-(ಎಂಟು ನೂರ ನಾಲ್ಕು ಕೋಟಿ ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳಾದ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳಿಗೆ ಅನುಕ್ರಮವಾಗಿ ಶೇ.85:10:5ರ ಅನುಪಾತದಲ್ಲಿ ಬಿಡುಗಡೆ ಮಾಡಬೇಕಾಗಿರುತ್ತದೆ.

ಪ್ರಸ್ತುತ 2020-21ನೇ ಸಾಲಿನ ಆರ್ಥಿಕ ವರ್ಷದ ಆಯವ್ಯಯದಲ್ಲಿ ಜಿಲ್ಲಾ ಪಂಚಾಯತ್‌ಗಳಿಗೆ ಲೆಕ್ಕ ಶೀಷಿಕೆ:2515-00-196-6-12ರಡಿ ರೂ.16085.00ಲಕ್ಷಗಳು, ತಾಲ್ಲೂಕು ಪಂಚಾಯತಿಗಳಿಗೆ ಲೆಕ್ಕ ಶೀರ್ಷಿಕೆ:2515-00-197-6-12ರಡಿ ರೂ.32170.00ಲಕ್ಷಗಳು ಹಾಗೂ ಗ್ರಾಮ ಪಂಚಾಯತ್‌ಗಳಿಗೆ

ಲೆಕ್ಕ ಶೀರ್ಷಿಕೆ:2515-00-198-6-12ರಡಿ ರೂ.273445.00ಲಕ್ಷಗಳು, ಒಟ್ಟು ರೂ.321700.00ಲಕ್ಷಗಳನ್ನು ಒದಗಿಸಲಾಗಿದೆ. ಈ ಮೊತ್ತದಲ್ಲಿ 2020-21ನೇ ಸಾಲಿನ ಮೂಲ ಅನುದಾನದ (Basic Grant) ಮೊದಲನೇ ಕಂತು ರೂ.80425.00ಲಕ್ಷಗಳನ್ನು ಮೇಲೆ ಓದಲಾದ (1) ಮತ್ತು (2)ರ ಮಾರ್ಗಸೂಚಿಗಳನ್ವಯ ರಾಜ್ಯದ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ 85:10:5ರ ಅನುಪಾತದಂತೆ ಗ್ರಾಮ ಪಂಚಾಯತ್‌ಗಳಿಗೆ ರೂ.683,61,25,000/-ಗಳು, ತಾಲ್ಲೂಕು ಪಂಚಾಯತಿಗಳಿಗೆ ರೂ.80,42,50,000/-ಗಳು ಹಾಗೂ ಜಿಲ್ಲಾ ಪಂಚಾಯತಿಗಳಿಗೆ ರೂ.40,21,25,000/-ಗಳನ್ನು ಇಂಟರ್‌ನೆಟ್ ಬ್ಯಾಂಕಿಂಗ್ ಮುಖಾಂತರ ನೇರವಾಗಿ ಸಂಬಂಧಪಟ್ಟ ಬ್ಯಾಂಕು ಖಾತೆಗಳಿಗೆ ಜಮೆ ಮಾಡಲು ಸರ್ಕಾರವು ನಿರ್ಧರಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 254 ಜಿಪಸ 2020, ದಿನಾಂಕ:19-06-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 15ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ 2020-21ನೇ ಸಾಲಿನ ಮೊದಲನೇ ಕಂತಿನ ಮೂಲ ಅನುದಾನವನ್ನು ಕೇಂದ್ರ ಸರ್ಕಾರವು ರಾಜ್ಯಕ್ಕೆ ಬಿಡುಗಡೆ ಮಾಡಿರುವ ರೂ.804,25,00,000/-(ಎಂಟು ನೂರ ನಾಲ್ಕು ಕೋಟಿ ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ರಾಜ್ಯದ ಪಂಚಾಯತ್ ರಾಜ್ ಸಂಸ್ಥೆಗಳಾದ ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್, ಮತ್ತು ಜಿಲ್ಲಾ ಪಂಚಾಯತಿಗಳಿಗೆ ಕ್ರಮವಾಗಿ 85:10:5ರ ಅನುಪಾತದಲ್ಲಿ 6010 ಗ್ರಾಮ ಪಂಚಾಯತ್‌ಗಳಿಗೆ ರೂ.683,61,25,000/-ಗಳು(ಅನುಬಂಧ-I), 226 ತಾಲ್ಲೂಕು ಪಂಚಾಯತಿಗಳಿಗೆ ರೂ.80,42,50,000/-ಗಳು(ಅನುಬಂಧ-II) ಹಾಗೂ 30 ಜಿಲ್ಲಾ ಪಂಚಾಯತಿಗಳಿಗೆ ರೂ.40,21,25,000/- (ಅನುಬಂಧ-III)ಗಳನ್ನು ಸಂಬಂಧಪಟ್ಟ ಬ್ಯಾಂಕ್‌ಗಳ ಖಾತೆಗಳಿಗೆ ನೇರವಾಗಿ ಆನ್‌ಲೈನ್ ಮೂಲಕ ಅನುದಾನವನ್ನು ಜಮೆ ಮಾಡಲು ಆದೇಶಿಸಿದೆ.

ಅದರಂತೆ, ಪಂಚಾಯತ್ ರಾಜ್ ಸಂಸ್ಥೆಗಳಿಗೆ ನೀಡಲಾಗುವ ಹಣವನ್ನು ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ರಾಜ್ಯ ಹುಜೂರ್ ಖಜಾನೆಯಿಂದ ಪೇಯಿಸ್ ರಸೀತಿಯ ಮೇಲೆ ಡ್ರಾ ಮಾಡಿ ನಂತರ ಚೆಕ್‌ಗಳನ್ನು 14ನೇ ಹಣಕಾಸು ಆಯೋಗದ ಉಳಿತಾಯ ಖಾತೆ ಸಂಖ್ಯೆ:64207694077 ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ವಿಧಾನಸೌಧ ಶಾಖೆ, ಅಂಬೇಡ್ಕರ್ ವೀದಿ, ಬೆಂಗಳೂರು-560001(IFSC CODE SBIN0040277)ಗೆ ಬಿಡುಗಡೆಗೊಳಿಸಿ ನಂತರ ಈ ಸಂಬಂಧಪಟ್ಟ ಬ್ಯಾಂಕಿನ RTGS/NEFT ಮುಖಾಂತರ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಮೊತ್ತದ ಅನುಸಾರ ಬಿಡುಗಡೆ ಮಾಡಲು ಆದೇಶಿಸಿದೆ.

ಈ ಅನುದಾನವನ್ನು ಲೆಕ್ಕ ಶೀರ್ಷಿಕೆ 2515-00-196-6-12, 2515-00-197-6-12 ಮತ್ತು 2515-00-198-6-12 ರಿಂದ ಬಿಡುಗಡೆ ಮಾಡಿ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಪಾವತಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 02 ಟಿಎಫ್‌ಪಿ 2020, ದಿನಾಂಕ: 01-04-2020ರಲ್ಲಿ ಸಂಬಂಧಿಸಿದ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹಾಗೂ ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ:ಎಫ್‌ಡಿ 27 ಬಿಜಿಎಲ್ 2020, ದಿನಾಂಕ:18-06-2020ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

19/06/2020
(ಸಿ.ಮಂಜುಳಾ)
ಸರ್ಕಾರದ ಅಧೀನ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

19/6/2020

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ.ನಂ.5329) ಬೆಂಗಳೂರು.
4. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ/ ಮುಖ್ಯ ಲೆಕ್ಕಾಧಿಕಾರಿಗಳಿಗೆ.
5. ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
7. ಉಪ ನಿರ್ದೇಶಕರು, ಎಸ್.ಎಂ.ಸಿ. ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
8. ಮುಖ್ಯ ವ್ಯವಸ್ಥಾಪಕರು, ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ವಿಧಾನಸೌಧ, ಬೆಂಗಳೂರು.
9. ಕರ್ನಾಟಕ ವಿಕಾಸ/ ವೆಬ್‌ಸೈಟ್.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
2. ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ &ಆರ್) ರವರ ಆಪ್ತ ಕಾರ್ಯದರ್ಶಿಗಳು.
5. ಸರ್ಕಾರದ ಉಪ ಕಾರ್ಯದರ್ಶಿ (ಆರ್ಥಿಕ ಆಯೋಗ ಕೋಶ), 4ನೇ ಮಹಡಿ, 4ನೇ ಹಂತ, ಬಹುಮಹಡಿ ಕಟ್ಟಡ, ರವರ ಆಪ್ತ ಸಹಾಯಕರು.

6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.
7. ನಿರ್ದೇಶಕರು (ಪಂ.ರಾಜ್-1&2) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.